## ಗದ್ಯ ೪. ಭಾಗ್ಯಶಿಲ್ಪಿಗಳು
## (ನಾಲ್ವಡಿ ಕೃಷ್ಣರಾಜ ಒಡೆಯರು, ಸರ್. ಎಂ. ವಿಶ್ವೇಶ್ವರಯ್ಯ)

**ಆ) ಕೊಟ್ಟಿರುವ ಪ್ರಶ್ನೆಗಳಿಗೆ ಮೂರು-ನಾಲ್ಕು ವಾಕ್ಯಗಳಲ್ಲಿ ಉತ್ತರಿಸಿ.**

**೧. ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಯಾವ ಕ್ಷೇತ್ರಗಳು ಸ್ವಯಂ ಆಡಳಿತ ಕ್ಷೇತ್ರಗಳಾದವು?**

**ಉ)** ನಾಲ್ವಡಿ ಕೃಷ್ಣರಾಜ ಒಡೆಯರು ಕಾಲದಲ್ಲಿ ಗ್ರಾಮ ನಿರ್ಮಲೀಕರಣ, ವೈದ್ಯ ಸಹಾಯ, ವಿದ್ಯಾ ಪ್ರಚಾರ, ನೀರಿನ ಸೌಕರ್ಯ, ಪ್ರಯಾಣ ಸೌಲಭ್ಯ ಮುಂತಾದ ಕ್ಷೇತ್ರಗಳು ಸ್ವಯಂ ಆಡಳಿತ ಕ್ಷೇತ್ರಗಳಾದವು.

**೨. ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಯಾವ ನೀರಾವರಿ ಯೋಜನೆಗಳು ಕಾರ್ಯರೂಪಕ್ಕೆ ಬಂದವು?**

ಉ) ೧೯೦೦ರಲ್ಲಿಯೇ ಶಿವನ ಸಮುದ್ರದ ಬಳಿ ಕಾವೇರಿ ನದಿಯಿಂದ ಜಲವಿದ್ಯುತ್ ಉತ್ಪಾದನಾ ಕೇಂದ್ರ ಪ್ರಾರಂಭವಾಯಿತು. ಇದು ಭಾರತ ಮಾತ್ರವಲ್ಲ, ಏಷ್ಯಾ ಖಂಡದಲ್ಲೇ ಮೊದಲ ಜಲವಿದ್ಯುತ್ ಯೋಜನೆ. ೧೯೦೭ರಲ್ಲಿ ವಾಣಿ ವಿಲಾಸ ಸಾಗರ(ಮಾರಿ ಕಣಿವೆ) ಕಟ್ಟಲ್ಪಟ್ಟಿತು. ೧೯೧೧ರಲ್ಲಿ ಕೃಷ್ಣರಾಜ ಸಾಗರ ಇವರ ಬೃಹತ್ ಕೊಡುಗೆ.

**೩.. ಶಿಕ್ಷಣದ ಬಗ್ಗೆ ವಿಶ್ವೇಶ್ವರಯ್ಯನವರು ಏನೆಂದು ಹೇಳಿದ್ದಾರೆ.?**

ಉ) **"**ಶಿಕ್ಷಣಕ್ಕಾಗಿ ಶಿಕ್ಷಣವಿರಬೇಕು ಅದು ಕೆಲವೇ ಜನರ ಸೊತ್ತಾಗದೆ ಪ್ರಗತಿಪರ ರಾಜ್ಯದಲ್ಲಿ ಎಲ್ಲರ ಆಜನ್ಮಸಿದ್ಧ ಹಕ್ಕಾಗಬೇಕು**"** ಎಂದು ವಿಶ್ವೇಶ್ವರಯ್ಯನವರು ಶಿಕ್ಷಣದ ಬಗ್ಗೆ ಹೇಳಿದ್ದಾರೆ.

**೪. ನೆಹರೂ ಅವರು ಸರ್. ಎಂ. ವಿಶ್ವೇಶ್ವರಯ್ಯನವರ ಬಗ್ಗೆ ಏನೆಂದು ಹೇಳಿದ್ದಾರೆ?**

ಉ) **"**ದುರಾದೃಷ್ಟವಶಾತ್ ಭಾರತೀಯರಾದ ನಾವು ಹೆಚ್ಚು ಮಾತನಾಡುವವರು ಮತ್ತು ನುಡಿದಂತೆ ನಡೆಯಲಾರದವರೆಂಬ ದೂಷಣೆಗೆ ಒಳಗಾಗಿದ್ದೇವೆ. ತಾವು ಈ ಮಾತಿಗೆ ಬಹುದೊಡ್ಡ ರೀತಿಯಲ್ಲಿ ಹೊರತಾಗಿದ್ದೀರಿ. ತಾವು ಕಡಿಮೆ ಮಾತನಾಡಿದ್ದೀರಿ. ಹೆಚ್ಚು ಕೆಲಸ ಮಾಡಿದ್ದೀರಿ ಅದನ್ನು ನಾವು ತಮ್ಮಿಂದ ಕಲಿಯೋಣ**"** ಎಂದು ಪಂಡಿತ್ ಜವಾಹರಲಾಲ ನೆಹರು ಅವರು ಬೆಂಗಳೂರಿನಲ್ಲಿ ನಡೆದ ವಿಶ್ವೇಶ್ವರಯ್ಯನವರ ಶತಮಾನೋತ್ಸವ ಸಮಾರಂಭದಲ್ಲಿ ಅವರ ಬಗ್ಗೆ ಈ ರೀತಿ ನುಡಿದರು.

**೫. ಹಣಕಾಸು ನೀತಿಯಲ್ಲಿ ವಿಶ್ವೇಶ್ವರಯ್ಯನವರು ಮಾಡಿದ ಮಾರ್ಪಾಡುಗಳಾವುವು?**

ಉ) ರಾಜ್ಯದ ಆರ್ಥಿಕ ಚಟುವಟಿಕೆಗಳಿಗೆ ಭದ್ರ ಬುನಾದಿ ಹಾಕುವ ಉದ್ದೇಶದಿಂದ ಹಣಕಾಸು ನೀತಿಯಲ್ಲಿ ಮಾರ್ಪಾಡು ಮಾಡಿದರು. ಇದಕ್ಕಾಗಿ ೧೯೧೩ರಲ್ಲಿ ಮೈಸೂರು ಬ್ಯಾಂಕನ್ನು ಸ್ಥಾಪಿಸಿದರು. ಅನಂತರ ಉಳಿತಾಯ ಬ್ಯಾಂಕ್‌ಗಳು ಅಸ್ತಿತ್ವಕ್ಕೆ ಬಂದವು. ಕೈಗಾರಿಕೆಗಳ ಅಭಿವೃದ್ದಿಗೆ ಫೀಡರ್ ಬ್ಯಾಂಕ್ ಹಾಗೂ ಕೈಗಾರಿಕಾ ಹೂಡಿಕೆ ಮತ್ತು ಅಭಿವೃದ್ಧಿ ನಿಧಿಗಳು ರಚಿತಗೊಂಡವು. ಸಾರ್ವಜನಿಕ ಜೀವವಿಮಾ ಯೋಜನೆ ಜಾರಿಗೆ ತಂದರು. ರೈತರಿಗೆ ಹಾಗೂ ಕರಕುಶಲ ಕೆಲಸಗಾರರಿಗೆ ಸಾಲದ ಸೌಲಭ್ಯ ನೀಡಲು ಸಹಕಾರಿ ಕ್ಷೇತ್ರವನ್ನು ಬಲವರ್ಧನೆಗೊಳಿಸಿದರು. ಪ್ರಾಂತೀಯ ಸಹಕಾರಿ ಬ್ಯಾಂಕಗಳನ್ನು ಸ್ಥಾಪಿಸಿದರು. ರಾಜ್ಯದ ಆಸ್ತಿಯನ್ನು ಹೆಚ್ಚಿಸಿ, ಆದಾಯ ತರುವುದರ ಮೂಲಕ ಅಭಿವೃದ್ದಿ ಕಾರ್ಯಗಳ ಪ್ರಭಾವವನ್ನು ಅಳೆಯಲು ಅನುಕೂಲವಾಗುವಂತೆ ಆಯವ್ಯಯದಲ್ಲಿ ಹೊಸ ದೃಷ್ಟಿಕೋನವನ್ನು ಕಂಡುಕೊಂಡರು.

**ಇ) ಕೊಟ್ಟಿರುವ ಪ್ರಶ್ನೆಗಳಿಗೆ ಎಂಟು-ಹತ್ತು ವಾಕ್ಯಗಳಲ್ಲಿ ಉತ್ತರಿಸಿ.**

**೧. ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಮೈಸೂರು 'ಮಾದರಿ ಮೈಸೂರು ರಾಜ್ಯ' ಹೇಗಾಯಿತು?**

**ಉ)** ೧೯೦೨ರ ಆಗಷ್ಟ ೮ನೇ ತಾರೀಖಿನಿಂದ ಮೈಸೂರು ರಾಜ್ಯದ ನೇರ ಉಸ್ತುವಾರಿ ಕೃಷ್ಣರಾಜ ಒಡೆಯರ ಸುಪರ್ದಿಗೆ ಬಂದಿತು. ಆಗ ದಿವಾನರಾಗಿದ್ದ ಸರ್. ಕೆ. ಶೇಷಾದ್ರಿ ಅಯ್ಯರ್‌ರವರ ಸಹಕಾರದೊಡನೆ ಮೈಸೂರು ರಾಜ್ಯದ ಸರ್ವತೋಮುಖ ಅಭಿವೃದ್ಧಿಗೆ ನಾಲ್ವಡಿ ಕೃಷ್ಣರಾಜ ಒಡೆಯರು ಕಂಕಣಬದ್ಧರಾದರು. ಇವರ ಕಾಲದಲ್ಲಿ ಇಡೀ ಭರತ ಖಂಡದಲ್ಲಿ ಯಾವ ಸಂಸ್ಥಾನವೂ ಕಾಣದ ಅಭಿವೃದ್ಧಿಯನ್ನು ಮೈಸೂರು ರಾಜ್ಯವು **ಕಂಡುದರಿಂದ** ಮೈಸೂರು ಸಂಸ್ಥಾನಕ್ಕೆ 'ಮಾದರಿ ಮೈಸೂರು' ಎಂಬ ಕೀರ್ತಿ ಪ್ರಾಪ್ತವಾಯಿತು. ನಾಲ್ವಡಿ ಕೃಷ್ಣರಾಜ ಒಡೆಯರು ಅರಸು ಮನೆತನದಿಂದ ಬಂದವರಾಗಿದ್ದರೂ ಸಹ, ಜನತೆ ಆಡಳಿತದಲ್ಲಿ ಪಾಲ್ಗೊಳ್ಳುವಿಕೆಯ ಪರವಾಗಿದ್ದರು.

**೨. ವಿಶ್ವೇಶ್ವರಯ್ಯನವರು ಮೈಸೂರು ದಿವಾನರಾಗಿ ಸಲ್ಲಿಸಿದ ಸೇವೆಯ ಕುರಿತು ಬರೆಯಿರಿ.**

ಉ) ವಿಶ್ವೇಶ್ವರಯ್ಯನವರು ದಿವಾನರಾಗಿದ್ದಾಗ ಹೊಸ ಯುಗಕ್ಕೆ ನಾಂದಿ ಹಾಡಿದರು. ಆಡಳಿತದ ಯಂತ್ರ ಚುರುಕುಗೊಳಿಸಿದರು. ಕಛೇರಿ ಕೆಲಸ ಕಾರ್ಯಗಳಲ್ಲಿ ಅನೇಕ ಸುಧಾರಣೆಗಳನ್ನು ತಂದರು. ದಕ್ಷತೆ ಮತ್ತು ಪ್ರಾಮಾಣಿಕತೆಗೆ ಹೆಚ್ಚು ಮಹತ್ವ ನೀಡಿದರು. ನ್ಯಾಯಾಂಗ ಮತ್ತು ಕಾರ್ಯಾಂಗಗಳಿಗೆ ಹೆಚ್ಚು ಮಹತ್ವ ನೀಡಿದರು ನೇಮಕಾತಿಯಲ್ಲಿ ಸ್ಥಳಿಯರಿಗೆ ಹೆಚ್ಚಿನ ಆದ್ಯತೆಯನ್ನು ನೀಡಿದರು. ಗಾಂಧೀಜಿಯವರು ಮೈಸೂರಿನ ಆಡಳಿತ ರೀತಿಯನ್ನು ಮುಕ್ತ ಕಂಠದಿಂದ ಹೊಗಳಿದರು. ಶಿಕ್ಷಣ ಕ್ಷೇತ್ರ ಬೆಳೆಸಿದರು. ಶಾಲಾ, ಕಾಲೇಜು, ಕನ್ನಡ ಸಾಹಿತ್ಯ ಪರಿಷತ್ ಸ್ಥಾಪನೆ, ಕಬ್ಬಿಣ ಮತ್ತು ಉಕ್ಕಿನ ಕಾರ್ಖಾನೆ, ಔಷಧಿ, ಸೊಪ್ಪು, ಬಟ್ಟೆ ಹೀಗೆ ನೂರಾರು ಕೈಗಾರಿಕೆಗಳನ್ನು ಸ್ಥಾಪಿಸಿದರು. ಆರ್ಥಿಕ ಕ್ಷೇತ್ರದಲ್ಲಿ ಮೈಸೂರು ಬ್ಯಾಂಕ್ ಸ್ಥಾಪಿಸಿದರು. ಮೈಸೂರು ಅರಮನೆ, ಟೌನ್ ಹಾಲ್ ಆಸ್ಪತ್ರೆ, ಲಲಿತಮಹಲ್, ಮುಂತಾದವು ನಿರ್ಮಾಣವಾದವು ಹೀಗೆ ಮೈಸೂರನ್ನು ಮಾದರಿ ರಾಜಧಾನಿಯಾಗಿಸಿದರು.

**೩. ಶಿಕ್ಷಣ ಕ್ಷೇತ್ರಕ್ಕೆ ವಿಶ್ವೇಶ್ವರಯ್ಯನವರು ಸಲ್ಲಿಸಿದ ಕೊಡುಗೆಯನ್ನು ತಿಳಿಸಿ**

ಉ) ಆಧುನಿಕ ಶಿಕ್ಷಣವೇ ಎಲ್ಲ ಸಮಸ್ಯೆಗಳಿಗೆ ಪರಿಹಾರ ಎಂದು ಘೋಷಿಸಿದರು. ಕನ್ನಡ ಸಾಹಿತ್ಯ ಪರಿಷತ್ತನ್ನು ಸ್ಥಾಪಿಸಿದರು.

ಇವರು ೧೯೧೩ರಲ್ಲಿ ಪ್ರಾಥಮಿಕ ಶಿಕ್ಷಣ ನಿಬಂಧನೆಯನ್ನು ಜಾರಿಗೆ ತಂದರು. ಪ್ರೌಢ ಶಿಕ್ಷಣ ಶಾಲೆಗಳು ಮದ್ರಾಸ್ ವಿಶ್ವವಿದ್ಯಾಲಯದ ನಿಯಂತ್ರಣಕ್ಕೆ ಒಳಪಟ್ಟಿದ್ದವು. ಇದನ್ನು ಬದಲಿಸಿ ಸಂಸ್ಥಾನವೇ ಪ್ರತ್ಯೇಕವಾದ ಪ್ರೌಢಶಿಕ್ಷಣದ ಅಂತಿಮ ಪರೀಕ್ಷೆ ನಡೆಸುವಂತೆ ಮಾಡಿದರು. ಮೈಸೂರು ವಿಶ್ವವಿದ್ಯಾನಿಲಯ ಸ್ಥಾಪನೆ ಮಾಡಿದರು. ಶ್ರೀಯುತರು "ಶಿಕ್ಷಣಕ್ಕಾಗಿ ಶಿಕ್ಷಣವಿರಬೇಕು. ಅದು ಕೆಲವೇ ಜನರ ಸ್ವತ್ತಾಗಬಾರದು. ಶಿಕ್ಷಣ ಎಲ್ಲರ ಆಜನ್ಮಸಿದ್ಧ ಹಕ್ಕಾಗಬೇಕು." ಎಂದು ಸಾರಿ ಹೇಳಿದರು. ತಾಂತ್ರಿಕ ಸಂಸ್ಥೆಗಳನ್ನು ಪ್ರಾರಂಭಿಸಿದರು. ಮಹಿಳಾ ಶಿಕ್ಷಣಕ್ಕೆ ಹೆಚ್ಚಿನ ಮಹತ್ವವನ್ನು ನೀಡಿದರು ಇವರು ಬೆಂಗಳೂರಿನಲ್ಲಿ ಮೆಕಾನಿಕಲ್ ಎಂಜಿನಿಯರಿಂಗ್ ಶಾಲೆ, ಮೈಸೂರಿನಲ್ಲಿ ಚಾಮರಾಜೇಂದ್ರ. ತಾಂತ್ರಿಕ ಮತ್ತು ವೃತ್ತಿಪರ ಶಿಕ್ಷಣಕ್ಕೆ ಹೆಚ್ಚಿನ ಮಹತ್ವ ನೀಡಿದರು. ಹಿಂದೂಳಿದ ವರ್ಗದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಕೊಡಸಿದರು. ಹೀಗೆ ಶಿಕ್ಷಣ ರಂಗಕ್ಕೆ ಅಪಾರ ಕೊಡುಗೆಯನ್ನು ನೀಡಿದರು.

**ಈ) ಸಂದರ್ಭಸಹಿತ ಸ್ವಾರಸ್ಯವನ್ನು ವಿವರಿಸಿ.**

**೧. "ಸಾಮಾಜಿಕ ಕಾನೂನುಗಳ ಹರಿಕಾರ."**

**ಆಯ್ಕೆ:** ಈ ವಾಕ್ಯವನ್ನು **ಡಿ. ಎಸ್. ಜಯಪ್ಪಗೌಡ** ಅವರು ಬರೆದಿರುವ **'ಭಾಗ್ಯಶಿಲ್ಪಿಗಳು'** ಎಂಬ ಗದ್ಯ ಭಾಗದಿಂದ ಆರಿಸಲಾಗಿದೆ.

**ಸಂದರ್ಭ:** ನಾಲ್ವಡಿ ಕೃಷ್ಣರಾಜ ಒಡೆಯರ ಕೊಡುಗೆಗಳನ್ನು ವಿವರಿಸುವ ಸಂದರ್ಭದಲ್ಲಿ ಲೇಖಕರು ಈ ಮಾತನ್ನು ಹೇಳಿದ್ದಾರೆ. ನಾಲ್ವಡಿ ಕೃಷ್ಣರಾಜ ಒಡೆಯರು ಸ್ಥಳೀಯ ಸಂಸ್ಥೆಗಳನ್ನು ರಚಿಸಿ ಆಡಳಿತ ವಿಕೇಂದ್ರೀಕರಣ ಮಾಡಿದರು. ಮೈಸೂರು ಸಂಸ್ಥಾನವನ್ನು ಮಾದರಿ ಸಂಸ್ಥಾನವನ್ನಾಗಿ ರೂಪಿಸಿದರು. 'ಸಾಮಾಜಿಕ ಕಾನೂನುಗಳ ಹರಿಕಾರ' ಎಂದು ಹೆಸರಾದರು. ಸಾಹಿತ್ಯ, ಸಂಗೀತ, ವಾಸ್ತುಶಿಲ್ಪಗಳ ಅಭಿವೃದ್ಧಿಗೆ ಒತ್ತು ನೀಡಿದರು.

**ಸ್ವಾರಸ್ಯ:** ಸ್ವತಃ ರಾಜರಾಗಿ ಕೇಂದ್ರಿಕೃತ ವ್ಯವಸ್ಥೆಗೆ ಬದಲಾಗಿ ಆಡಳಿತದಲ್ಲಿ ವಿಕೇಂದ್ರೀಕೃತ ವ್ಯವಸ್ಥೆ ತಂದು ಸಾಮಾಜಿಕ ಕಾನೂನುಗಳನ್ನು ಜಾರಿಗೊಳಿಸಿದ ಒಡೆಯರಿಗೆ ಈ ಬಿರುದು ನೀಡಿರುವುದು ಒಪ್ಪುವಂತಾದ್ದಾಗಿದೆ.

**೨. "ಅವರ ಸಾಧನೆಯ ಕಿರೀಟಕ್ಕೆ ಮತ್ತೊಂದು ಗರಿಯನ್ನು ಸೇರಿಸಿತು."**

**ಆಯ್ಕೆ:** ಈ ವಾಕ್ಯವನ್ನು **ಡಿ. ಎಸ್. ಜಯಪ್ಪಗೌಡ** ಅವರು ಬರೆದಿರುವ **'ಭಾಗ್ಯಶಿಲ್ಪಿಗಳು'** ಎಂಬ ಗದ್ಯ ಭಾಗದಿಂದ ಆರಿಸಲಾಗಿದೆ.

**ಸಂದರ್ಭ:** ಪೂನಾದ ಮಥಾ ಕಾಲುವೆಗೆ, ನೀರಿನ ನೆಲೆಯಾಗಿದ್ದ ಫೀಪ್ ಜಲಾಶಯಕ್ಕೆ ಸ್ವಯಂಚಾಲಿತ ಬಾಗಿಲುಗಳನ್ನು ಅಳವಡಿಸಿದರು. ಇದರ ಅನ್ವೇಷಣೆ ಅವರ ಕಿರೀಟಕ್ಕೆ ಮತ್ತೊಂದು ಗರಿಯನ್ನು ಸೇರಿಸಿತು ಎಂದು ಲೇಖಕರು ಹೇಳಿದ್ದಾರೆ.

**ಸ್ವಾರಸ್ಯ:** ವಿಶ್ವೇಶ್ವರಯ್ಯ ಅವರಲ್ಲಿದ್ದ ಬುದ್ಧಿಶಕ್ತಿ ಹಾಗೂ ಅನ್ವೇಷಣಾ ಸಾಮರ್ಥ್ಯವನ್ನು ಈ ಮಾತಿನ ಮೂಲಕ ಸ್ವಾರಸ್ಯ ಪೂರ್ಣವಾಗಿ ಅಭಿವ್ಯಕ್ತಪಡಿಸಲಾಗಿದೆ.

**೩. "ಆದರ್ಶ ಪುರುಷರೊಬ್ಬರು ದಿವಾನರಾದದ್ದು ಮೈಸೂರು ಸಂಸ್ಥಾನದ ಪುಣ್ಯ ವಿಶೇಷವೇ ಸರಿ."**

**ಆಯ್ಕೆ:** ಈ ವಾಕ್ಯವನ್ನು **ಡಿ. ಎಸ್. ಜಯಪ್ಪಗೌಡ** ಅವರು ಬರೆದಿರುವ **'ಭಾಗ್ಯಶಿಲ್ಪಿಗಳು'** ಎಂಬ ಗದ್ಯ ಭಾಗದಿಂದ ಆರಿಸಲಾಗಿದೆ.

**ಸಂದರ್ಭ:** ಶ್ರೀಯುತರು ಮೈಸೂರು ಸಂಸ್ಥಾನದ ದಿವಾನರಾದ ಮೇಲೆ ಆಡಳಿತ ಯಂತ್ರ ಚುರುಕುಗೊಂಡಿತು. ಕಛೇರಿಯ ಕೆಲಸ ಕಾರ್ಯಗಳಲ್ಲಿ ಸುಧಾರಣೆ ತಂದರು. ಹೀಗೆ ಮೈಸೂರನ್ನು ಮಾದರಿಯಾಗಿ ಮಾಡಿದ್ದನ್ನು ಕಂಡ ಜನರು ಈ ಮೇಲಿನಂತೆ ಹಾಡಿ ಹೊಗಳಿದ್ದಾರೆ.

**ಸ್ವಾರಸ್ಯ:** ಮೈಸೂರು ಸಂಸ್ಥಾನದ ದಿವಾನರಾಗಿ ಶ್ರೀಯುತರು ಮಾಡಿದ ಕಾರ್ಯಗಳು ಅಭೂತಪೂರ್ವವಾದವುಗಳು ಎಂಬುದನ್ನು ಇ ಮಾತಿನಲ್ಲಿ ಬಹುಸ್ವಾರಸ್ಯ ಪೂರ್ಣವಾಗಿ ಅಭಿವ್ಯಕ್ತಪಡಿಸಲಾಗಿದೆ.

**೪. "ಮೊಟ್ಟ ಮೊದಲಬಾರಿಗೆ ಸ್ತ್ರೀಯರಿಗೆ ಮತದಾನದ ಹಕ್ಕು"**

**ಆಯ್ಕೆ:** ಈ ವಾಕ್ಯವನ್ನು **ಡಿ. ಎಸ್. ಜಯಪ್ಪಗೌಡ** ಅವರು ಬರೆದಿರುವ **'ಭಾಗ್ಯಶಿಲ್ಪಿಗಳು'** ಎಂಬ ಗದ್ಯ ಭಾಗದಿಂದ ಆರಿಸಲಾಗಿದೆ.

**ಸಂದರ್ಭ:** ಮೈಸೂರು ಸಂಸ್ಥಾನದ ಮಹಾರಾಜರಾಗಿದ್ದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಜಾರಿ ಮಾಡಿದ ಸಾಮಾಜಿಕ ಕಾನೂನುಗಳನ್ನು ತಿಳಿಸುವ ಸಂದರ್ಭದಲ್ಲಿ '೧೯೨೭ರಲ್ಲಿ ಮೊಟ್ಟಮೊದಲ ಬಾರಿಗೆ ಸ್ತ್ರೀಯರಿಗೆ ಮತದಾನದ ಹಕ್ಕನ್ನು ನೀಡಿದರು.' ಎಂದು ಲೇಖಕರು ಉಲ್ಲೇಖಿಸಿದ್ದಾರೆ. ಇಷ್ಟೇ ಅಲ್ಲದೆ ದೇವದಾಸಿ ಪದ್ಧತಿ ನಿಷೇಧ, ವೇಶ್ಯಾ ವೃತ್ತಿ ತಡೆಗಟ್ಟುವ ಕಾಯ್ದೆ; ವಿಧವಾ ಮರು ವಿವಾಹ ಕಾಯ್ದೆ, ಸ್ತ್ರೀಯರಿಗೆ ಕಡ್ಡಾಯ ಶಿಕ್ಷಣ ಜಾರಿಗೊಳಿಸಿ ಅವರಿಗೆ ಬಲತುಂಬಿದರು.

**ಸ್ವಾರಸ್ಯ:** ಸ್ತ್ರೀಯರಿಗೆ ಸರಿಯಾದ ಸ್ಥಾನಮಾನಗಳಿಲ್ಲದ ಕಾಲದಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರು ಅವರಿಗೆ ಸಾಮಾಜಿಕ ನ್ಯಾಯ ದೊರಕಿಸಿದ್ದು ಸ್ವಾರಸ್ಯಪೂರ್ಣವಾಗಿ ವ್ಯಕ್ತಗೊಂಡಿದೆ.

**ಭಾಷಾ ಚಟುವಟಿಕೆ**

**೧) ಕೊಟ್ಟಿರುವ ಪದಗಳ ತತ್ಸಮ-ತದ್ಭವ ಬರೆಯಿರಿ.**

ವಂಶ- ಬಂಚ, ಸ್ಥಾನ-ತಾನ(ಣ), ಯಶ-ಜಸ

ಪಟ್ಟಣ-ಪತ್ತನ, ಕಾರ್ಯ-ಕಜ್ಜ

**೨) ನೀಡಿರುವ ಪದಗಳಲ್ಲಿ ಅನ್ಯದೇಶ್ಯ ಪದಗಳನ್ನು ಆರಿಸಿ ಬರೆಯಿರಿ.**

ಅನ್ಯದೇಶ್ಯ ಪದಗಳು: ಡಿಪ್ಲೊಮಾ, ಅಜಮಾಯಿಷಿ, ದಿವಾನ, ಸೋಪು, ಕಾರ್ಖಾನೆ, ಕಾಗದ, ಕಚೇರಿ